ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 583(899) |
| ಸದಸ್ಯರ ಹೆಸರು | : | ಶ್ರೀ ಬಿ.ಎಂ. ಫಾರೂಖ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 26.12.2022. |
| ಉತ್ತರಿಸಬೇಕಾದ ಸಚಿವರು | : | ಪ್ರವಾಸೋದ್ಯಮ ಹಾಗೂ ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು. |

| ಕ್ರಮ ಸಂಖ್ಯೆ: | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರು ತಾಲ್ಲೂಕಿನ ದೇರಳಕಟ್ಟೆ ವಲಯದಲ್ಲಿ ಹಲವಾರು ಮೆಡಿಕಲ್ ಕಾಲೇಜು ಹಾಗೂ ಆಸ್ಪತ್ರೆಗಳು ನಿರ್ಮಾಣಗೊಂಡಿದ್ದು, ಪ್ರತಿನಿತ್ಯ ಬಹಳ ಪ್ರಮಾಣದ "ಬಯೋಮೆಡಿಕಲ್ ವೇಸ್ಟ್" ಮತ್ತು "ಹಜ್ವಾರ್ಡಸ್ ವೇಸ್ಟ್" ಉತ್ಪತ್ತಿಯಾಗುತ್ತಿದ್ದು, ಈ ತ್ಯಾಜ್ಯವು ಮಾಲಿನ್ಯಕಾರಕ ಹಾಗೂ ಜನರ ಆರೋಗ್ಯದ ಮೇಲೆ ತಕ್ಷಣ ಪರಿಣಾಮ ಬೀರುವಂಥದ್ದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರು ತಾಲ್ಲೂಕಿನ ದೇರಳಕಟ್ಟೆ ವಲಯದಲ್ಲಿ ಇರುವ ಮೆಡಿಕಲ್ ಕಾಲೇಜು ಹಾಗೂ ಆಸ್ಪತ್ರೆಗಳಿಂದ ಉತ್ಪತ್ತಿಯಾಗುತ್ತಿರುವ "ಬಯೋಮೆಡಿಕಲ್ ವೇಸ್ಟ್ ಮತ್ತು ಹಜಾರ್ಡಸ್ ವೇಸ್ಟ್ ತ್ಯಾಜ್ಯದಿಂದ ಮಾಲಿನ್ಯ ಕಾರಕ ಹಾಗೂ ಜನರ ಆರೋಗ್ಯದ ಮೇಲೆ ತಕ್ಷಣ ಪರಿಣಾಮ ಬೀರುತ್ತಿರುವ ಬಗ್ಗೆ ಯಾವುದೇ ದೂರು ಸ್ವೀಕೃತವಾಗಿರುವುದಿಲ್ಲ. |
| ಆ) | ಬಂದಿದ್ದಲ್ಲಿ ಉತ್ಪತ್ತಿಯಾಗುವ ಈ ತ್ಯಾಜ್ಯವನ್ನು ಸುರಕ್ಷಿತವಾಗಿ ನಿರ್ವಹಿಸುವ ವಿಲೇವಾರಿ ಮಾಡುವ ಕ್ರಮಗಳ ಬಗ್ಗೆ ಈಗಿರುವ ವ್ಯವಸ್ಥೆಯ ಕುರಿತು ಮಾಹಿತಿ ಒದಗಿಸುವುದು. | ಅನ್ವಯಿಸುವುದಿಲ್ಲ. |
| ಇ) | ಇನ್ನೂ ಸಮರ್ಪಕವಾಗಿ ನಿರ್ವಹಿಸಬೇಕಾದಲ್ಲಿ ತೆಗೆದುಕೊಳ್ಳಬಹುದಾದ ನಿರ್ಣಯಗಳು ಹಾಗೂ ಕ್ರಮಗಳು ಏನು? (ಪೂರ್ಣ ಮಾಹಿತಿಯನ್ನು ಒದಗಿಸುವುದು). | ದೇರಳಕಟ್ಟೆ ವಲಯದಲ್ಲಿರುವ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಗಳಿಂದ ಉತ್ಪತ್ತಿಯಾಗುವ ಬಯೋಮೆಡಿಕಲ್ ವೇಸ್ಟ್ ಅನ್ನು ಮುಲ್ಕಿ, ದಕ್ಷಣ ಕನ್ನಡ ಜಿಲ್ಲೆ ಇಲ್ಲಿ ಕಾರ್ಯಾಚರಣೆಯಲ್ಲಿರುವ ಮೆ: ಸಸ್ಟೇನೆಬಿಲಿಟಿ ಹೆಲ್ತ್ ಕೇರ್ ಸೋಲ್ಯುಷನ್ಸ್ ಲಿಮಿಟೆಡ್ (ರಾಮ್ಕಿ ಸಂಸ್ಥೆ) ನ ಸಾಮಾನ್ಯ ಜೈವಿಕ ವೈದ್ಯಕೀಯ ಶುದ್ಧೀಕರಣ ಘಟಕದಲ್ಲಿ ವಿಲೇವಾರಿ ಮಾಡಲಾಗುತ್ತಿದೆ. ಅಲ್ಲದೆ ಉಡುಪಿ ಜಿಲ್ಲೆಯ ಪಡುಬಿದ್ರೆಯಲ್ಲಿ ಕಾರ್ಯಾಚರಣೆಯಲ್ಲಿರುವ ಮೆ: ಆಯುಷ್ ಎನ್ವಿರೋಟೆಕ್ ಪ್ರೈ. ಲಿಮಿಟೆಡ್, ಇಲ್ಲಿ ಸ್ಥಾಪಿಸಲಾಗಿರುವ ಸಾಮೂಹಿಕ ಜೀವ ವೈದ್ಯಕೀಯ ತ್ಯಾಜ್ಯ ವಿಲೇವಾರಿ ಘಟಕದಲ್ಲಿಯೂ ಸುರಕ್ಷಿತವಾಗಿ ವಿಲೇವಾರಿ ಮಾಡಲಾಗುತ್ತಿದೆ. |

ಸಂಖ್ಯೆ: ಅಪಜೀ 318 ಇಪಿಸಿ 2022

(ಆನಂದ್ ಸಿಂಗ್)
ಪ್ರವಾಸೋದ್ಯಮ ಹಾಗೂ ಜೀವಿಪರಿಸ್ಥಿತಿ
ಮತ್ತು ಪರಿಸರ ಸಚಿವರು.